**Akashvani : Bangalore**
**Regional Bulletin In Kannada**
**03.09.2025 : 14.30hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

******

**ಮುಖ್ಯಾಂಶಗಳು :**

1. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಸ್ತಿತ್ವಕ್ಕೆ, ಇಂದಿನಿಂದಲೇ ಪ್ರತ್ಯೇಕ ತೆರಿಗೆ ಸಂಗ್ರಹ
2. ಅಂಜನಾದ್ರಿ ಬೆಟ್ಟ ಸಮಗ್ರ ಅಭಿವೃದ್ಧಿಗೆ ಕ್ರಮ - ಮುಖ್ಯಮಂತ್ರಿ ಭರವಸೆ
3. ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ-೩ರ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸರ್ಕಾರದಿಂದ ಸಭೆ
4. ಕೊಡಗು ಜಿಲ್ಲೆಯಲ್ಲಿಂದು ಕೈಲ್ ಮುಹೂರ್ತ ಹಬ್ಬದ ಸಂಭ್ರಮ; ವಿವಿಧ ಕ್ರೀಡಾ ಸ್ಪರ್ಧೆಗಳ ಆಯೋಜನೆ

*********

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಧಿಕೃತವಾಗಿ ಜಾರಿಗೆ ಬಂದಿದ್ದು, ಬಿಬಿಎಂಪಿ ಆಡಳಿತ ಮುಕ್ತಾಯವಾಗಿದೆ. ಸದ್ಯ ೫ ನಗರ ಪಾಲಿಕೆಗಳಾಗಿ ಬೆಂಗಳೂರು ನಗರವನ್ನು ವಿಭಜನೆ ಮಾಡಿದ್ದು, ೧೯೮ ವಾರ್ಡ್‌ಗಳನ್ನು ನಗರ ಪಾಲಿಕೆಗಳಿಗೆ ಹಂಚಿಕೆ ಮಾಡಲಾಗಿದೆ. ಬೆಂಗಳೂರು ಕೇಂದ್ರ ನಗರ ಪಾಲಿಕೆಗೆ ೪೨ ವಾರ್ಡ್‌ಗಳು, ಬೆಂಗಳೂರು ಪೂರ್ವ ನಗರ ಪಾಲಿಕೆ ೧೭ ವಾರ್ಡ್‌ಗಳು, ಬೆಂಗಳೂರು ಉತ್ತರ ನಗರ ಪಾಲಿಕೆಗೆ ೪೧ ವಾರ್ಡ್‌ಗಳು, ಬೆಂಗಳೂರು ದಕ್ಷಿಣ ನಗರಗೆ ಪಾಲಿಕೆ ೩೭ ವಾರ್ಡ್‌ಗಳು, ಅತಿ ಹೆಚ್ಚು ಬೆಂಗಳೂರು ಪಶ್ಚಿಮ ನಗರ ಪಾಲಿಕೆಗೆ ೬೪ ವಾರ್ಡ್‌ಗಳನ್ನು ನೀಡಲಾಗಿದೆ. ಬೆಂಗಳೂರು ಆಡಳಿತ ಸುಧಾರಣೆ ದೃಷ್ಟಿಯಿಂದ ನಿವೃತ್ತ ಐಎಎಸ್ ಅಧಿಕಾರಿ ಬಿ.ಎಸ್.ಪಾಟೀಲ್ ನೇತೃತ್ವದ ಸಮಿತಿಯ ಶಿಫಾರಸ್ಸಿನಂತೆ ರಚಿಸಲಾಗಿರುವ ಗ್ರೇಟರ್ ಬೆಂಗಳೂರು ಪ್ರಾಧಿಕಾರ-ಜಿಬಿಎ ಅಡಿಯಲ್ಲಿ ಕಾರ್ಯ ನಿರ್ವಹಣೆಗೆ ೫ ಪಾಲಿಕೆಗಳನ್ನು ರಚಿಸಿ, ಸರ್ಕಾರವು ಜುಲೈ ೧೯ ರಂದು ಕರಡು ಅಧಿಸೂಚನೆ ಹೊರಡಿಸಿತ್ತು. ಇದಕ್ಕೆ ಸಂಬಂಧಿಸಿದಂತೆ ಆಕ್ಷೇಪಣೆ ಮತ್ತು ಸಲಹೆಗಳನ್ನು ಸಲ್ಲಿಸಲು ೩೦ ದಿನ ಕಾಲಾವಕಾಶ ನೀಡಲಾಗಿತ್ತು. ಸಾರ್ವಜನಿಕರಿಂದ ಬಂದ ೫೫ ಆಕ್ಷೇಪಣೆ ಮತ್ತು ಸಲಹೆಗಳನ್ನು ಪರಿಶೀಲಿಸಿ ನಿನ್ನೆ ಅಂತಿಮ ಅಧಿಸೂಚನೆ ಹೊರಡಿಸಿದ್ದು, ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಪೂರ್ವ, ಬೆಂಗಳೂರು ಪಶ್ಚಿಮ ಮತ್ತು ಬೆಂಗಳೂರು ಕೇಂದ್ರ ನಗರ ಪಾಲಿಕೆಗಳನ್ನು ರಚಿಸಲಾಗಿದೆ.

*********

ನಿನ್ನೆಯಿಂದಲೇ ಐದು ಪಾಲಿಕೆ ಅಸ್ಥಿತ್ವಕ್ಕೆ ಬಂದಿದ್ದು, ಪ್ರತಿ ಪಾಲಿಕೆಗೆ ಆಯುಕ್ತರು, ಹೆಚ್ಚುವರಿ ಆಯುಕ್ತರು, ತಲಾ ಇಬ್ಬರು ಜಂಟಿ ಆಯುಕ್ತರು, ಮುಖ್ಯ ಎಂಜಿನಿಯರ್ ಸೇರಿದಂತೆ ವಿವಿಧ

ಅಧಿಕಾರಿಗಳನ್ನು ಸರ್ಕಾರ ನಿಯೋಜಿಸಿದೆ. ಅದೇ ರೀತಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತರು, ವಿಶೇಷ ಆಯುಕ್ತರು, ಬಿಎಂಟಿಎಫ್‌ಗೆ ಅಧಿಕಾರಿಗಳನ್ನು ನಿಯೋಜನೆ ಮಾಡಿ ಆದೇಶಿಸಲಾಗಿದೆ. ಮುಖ್ಯ ಆಯುಕ್ತರಾಗಿ ಮಹೇಶ್ವರ್ ರಾವ್ ಅವರನ್ನು ನಿಯೋಜಿಸಲಾಗಿದೆ. ನಾಗರಿಕ ಸ್ನೇಹಿ ಆಡಳಿತ ಹಾಗೂ ಆಡಳಿತ ವಿಕೇಂದ್ರೀಕರಣಕ್ಕಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಸ್ಥಿತ್ವಕ್ಕೆ ತರಲಾಗಿದೆ. ಇಂದಿನಿಂದಲೇ ಪ್ರತ್ಯೇಕ ತೆರಿಗೆ ಸಂಗ್ರಹ ಸೇರಿದಂತೆ ೫ ಪಾಲಿಕೆಗಳ ಆಡಳಿತ ಆರಂಭವಾಗಿದೆ. ನವೆಂಬರ್ ೧ ರಂದು ನೂತನ ೫ ಪಾಲಿಕೆಗಳ ಕಟ್ಟಡಗಳಿಗೆ ಭೂಮಿ ಪೂಜೆ ನೆರವೇರಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹಾಗೂ ೫ ನಗರ ಪಾಲಿಕೆಗಳ ಕಾರ್ಯ ನಿರ್ವಹಣೆ ಕುರಿತು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಮಾಹಿತಿ ನೀಡಿದ್ದು, ನೂತನ ಪಾಲಿಕೆಗಳಿಗೆ ನಾಮಫಲಕಗಳ ಅಳವಡಿಕೆ ಕಾರ್ಯ ನಡೆಯಲಿದ್ದು, ಜನರಿಗೆ ಅಗತ್ಯ ಮಾಹಿತಿಯನ್ನು ಕ್ಯೂಆರ್ ಕೋಡ್ ಮೂಲಕ ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದರು.

****ಧ್ವನಿ**** ಮಹೇಶ್ವರ್ ರಾವ್

*********

ಅಂಜನಾದ್ರಿ ಬೆಟ್ಟವನ್ನು ಪ್ರವಾಸೋದ್ಯಮ, ಪೌರಾಣಿಕ ಹಾಗೂ ಅಧ್ಯಾತ್ಮಿಕ ಮಹತ್ವವನ್ನು ತಿಳಿಸುವ ರೀತಿಯಲ್ಲಿ ಅಭಿವೃದ್ಧಿಪಡಿಸುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದ್ದಾರೆ. ಅಂಜನಾದ್ರಿ ಕ್ಷೇತ್ರದ ಅಭಿವೃದ್ಧಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಕಾವೇರಿ ನಿವಾಸದಲ್ಲಿ ಇಂದು ನಡೆದ ಸಭೆಯಲ್ಲಿ ಅವರು ಮಾತನಾಡಿದರು. ಹನುಮ ಜಯಂತಿ ಸಂದರ್ಭದಲ್ಲಿ ಲಕ್ಷಾಂತರ ಜನರು ಬೆಟ್ಟಕ್ಕೆ ಭೇಟಿ ನೀಡುತ್ತಾರೆ. ಉತ್ತರ ಭಾರತದ ಪ್ರವಾಸಿಗರು ಸಹ ಹೆಚ್ಚಿನ ಸಂಖ್ಯೆಯಲ್ಲಿ ಕ್ಷೇತ್ರಕ್ಕೆ ಭೇಟಿ ನೀಡುತ್ತಾರೆ. ಯಾತ್ರಿಕರು ಉಳಿದುಕೊಳ್ಳಲು ಡಾರ್ಮೆಟರಿ ವ್ಯವಸ್ಥೆ, ಹಿರಿಯ ಭಕ್ತಾದಿಗಳು ಬೆಟ್ಟವೇರಲು ಅನುಕೂಲವಾಗುವಂತೆ ಮೆಟ್ಟಿಲುಗಳ ವ್ಯವಸ್ಥೆ, ಸಮುದಾಯ ಭವನ ನಿರ್ಮಾಣ ಹಾಗೂ ಇತರೆ ಪ್ರವಾಸಿ ಸೌಲಭ್ಯಗಳು ಸೇರಿ ಕ್ಷೇತ್ರದ ಸುತ್ತಮುತ್ತ ಮೂಲಸೌಕರ್ಯಗಳನ್ನು ಅಭಿವೃದ್ಧಿ ಪಡಿಸುವಂತೆ ಅವರು ನಿರ್ದೇಶಿಸಿದ್ದಾರೆ. ಕ್ಷೇತ್ರಕ್ಕೆ ಎರಡು ಹಂತಗಳಲ್ಲಿ ೨೦೦ ಕೋಟಿ ರೂಪಾಯಿಗಳ ಕಾಮಗಾರಿಗಳು ಮಂಜೂರಾಗಿದ್ದು, ಈವರೆಗೆ ಕಾಮಗಾರಿಗಳಿಗೆ ೧೦ ಕೋಟಿ ರೂಪಾಯಿಗಳನ್ನು ಇಲಾಖೆಯಿಂದ ಬಿಡುಗಡೆ ಮಾಡಲಾಗಿದ್ದು, ಬಾಕಿ ಅನುದಾನ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯಿಂದ ಹೆಚ್ಚುವರಿ ಅನುದಾನ ಒದಗಿಸಬೇಕಿದೆ ಎಂದು ಇದೇ ವೇಳೆ ಅಧಿಕಾರಿಗಳು ಮಾಹಿತಿ ನೀಡಿದರು.

*********

ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ-೩ರ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಜಲಸಂಪನ್ಮೂಲ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ವಿಧಾನಸೌಧದಲ್ಲಿಂದು ಸಭೆ ನಡೆಯಿತು. ಸಭೆಯಲ್ಲಿ ಭೂಸ್ವಾಧೀನ, ಪುನರ್ವಸತಿ, ಪುನರ್‌ನಿರ್ಮಾಣ, ಭೂಪರಿಹಾರ ಹಾಗೂ ವಿವಿಧ ನ್ಯಾಯಾಲಯಗಳಲ್ಲಿ ಹೆಚ್ಚುವರಿ ಭೂ ಪರಿಹಾರ ಕೋರಿ ದಾಖಲಿಸಿರುವ ಪ್ರಕರಣಗಳ ಕುರಿತು ಚರ್ಚೆ ನಡೆಯಿತು. ಸಭೆಯಲ್ಲಿ ಸಚಿವರಾದ ಪ್ರಿಯಾಂಕ್ ಖರ್ಗೆ, ಬೋಸರಾಜ್, ಶಿವಾನಂದ ಪಾಟೀಲ್, ಆರ್.ಬಿ.ತಿಮ್ಮಾಪುರ, ಶರಣಬಸಪ್ಪ ದರ್ಶನಪೂರ್, ಡಿ.ಸುಧಾಕರ್ ಸೇರಿದಂತೆ ಶಾಸಕರು, ರೈತ ಮುಖಂಡರು, ಅಧಿಕಾರಿಗಳು ಭಾಗವಹಿಸಿದ್ದರು.

*********

ನಟ ವಿಷ್ಣುವರ್ಧನ್ ಸ್ಮಾರಕ ನಿರ್ಮಾಣಕ್ಕೆ ೧೦ ಗುಂಟೆ ಜಾಗ ಮೀಸಲಿಡಬೇಕು ಹಾಗೂ ವಿಷ್ಣುವರ್ಧನ್ ಅವರಿಗೆ 'ಕರ್ನಾಟಕ ರತ್ನ' ನೀಡಬೇಕು ಎಂದು ಭಾರತಿ ವಿಷ್ಣುವರ್ಧನ್ ಮತ್ತು ಅನಿರುದ್ಧ್ ಮನವಿ ಮಾಡಿದ್ದಾರೆ. ಬೆಂಗಳೂರಿನ ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಅವರು ಮನವಿ ಸಲ್ಲಿಸಿದರು. ನಟ ವಿಷ್ಣುವರ್ಧನ್ ಅವರ ಹುಟ್ಟುಹಬ್ಬದ ಒಳಗೆ ಸ್ಮಾರಕ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಭೂಮಿ ಮಂಜೂರು ಮಾಡಬೇಕು ಎಂದು ಅವರು ಕೋರಿದ್ದಾರೆ.

*********

ಕೊಡಗು ಜಿಲ್ಲೆಯಲ್ಲಿಂದು ಕೈಲ್ ಮುಹೂರ್ತ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ಮಳೆಗಾಲದಲ್ಲಿ ಕೃಷಿ ಕಾರ್ಯದಲ್ಲಿ ತೊಡಗಿಸಿಕೊಂಡಿರುವ ರೈತಾಪಿ ವರ್ಗ ಕೃಷಿ ಕಾರ್ಯ ಮುಕ್ತಾಯಗೊಂಡ ಸಂಕೇತವಾಗಿ ಕೃಷಿ ಉಪಕರಣಗಳನ್ನು ಶುಚಿಗೊಳಿಸಿ, ಪೂಜಿಸುವ ಸಂಪ್ರದಾಯ ಈ ಹಬ್ಬದಲ್ಲಿದೆ. ನೇಗಿಲು,  ಪಿಕಾಸಿ, ಕತ್ತಿ, ಕೋವಿ ಸೇರಿದಂತೆ ವಿವಿಧ ಉಪಕರಣಗಳಿಗೆ ಇಂದು ಸಾಂಪ್ರದಾಯಿಕ ಪೂಜೆ ಸಲ್ಲಿಸಲಾಗುತ್ತಿದೆ. ಮಳೆಯ ನಡುವೇ ಕೊಡಗಿನಾದ್ಯಂತ ಕೈಲ್ ಮುಹೂರ್ತ ಹಬ್ಬದ ಸಂಭ್ರಮ ಮನೆ ಮಾಡಿದೆ. ಅನೇಕ ಗ್ರಾಮಗಳಲ್ಲಿ ಹಬ್ಬದ ಅಂಗವಾಗಿ ವೈವಿಧ್ಯಮಯ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

*********

ಉತ್ತರ ಕನ್ನಡ ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿಯಲ್ಲಿ ನಡೆದ ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನದಲ್ಲಿ ಹಣ ಉಳಿತಾಯ, ಹಣ ವೃದ್ಧಿ, ಡಿಜಿಟಲ್ ಸಾಕ್ಷರತೆ ಸೇರಿದಂತೆ ಜನ ಸುರಕ್ಷಾ ಯೋಜನೆಗಳ ಮಾಹಿತಿ ನೀಡಿ ಅರ್ಜಿಗಳನ್ನು ಸ್ವೀಕರಿಸಲಾಯಿತು. ಹಣಕಾಸು

ಸೇರ್ಪಡೆ ಪರಿಪೂರ್ಣತೆ ಅಭಿಯಾನದ ಭಾಗವಾಗಿ ಹಾಸನ ಜಿಲ್ಲೆಯ ಸಕಲೇಶಪುರದಲ್ಲಿ ಆಯೋಜಿಸಿದ್ದ ಜನ ಸುರಕ್ಷಾ ಶಿಬಿರದಲ್ಲಿ ಪ್ರಧಾನಮಂತ್ರಿ ಜನ್ ಧನ್ ಯೋಜನೆ, ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ, ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ, ಅಟಲ್ ಪಿಂಚಣಿ ಯೋಜನೆ ಸೇರಿ ಹಲವು ಯೋಜನೆಯ ಮಾಹಿತಿ ನೀಡಿ, ಅರ್ಜಿಗಳನ್ನು ಸ್ವೀಕರಿಸಲಾಯಿತು. ಕೇಂದ್ರ ಹಣಕಾಸು ಸೇವೆಗಳ ಇಲಾಖೆ ವತಿಯಿಂದ ಆಯೋಜಿಸಿರುವ ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನದ ಭಾಗವಾಗಿ ವಿಜಯಪುರ ಜಿಲ್ಲೆಯ ಹಡಗಲಿ ಗ್ರಾಮ ಪಂಚಾಯಿತಿಯಲ್ಲಿ ಜನ ಸುರಕ್ಷಾ ಶಿಬಿರ ನಡೆಸಿ, ಅರ್ಜಿಗಳನ್ನು ಸ್ವೀಕರಿಸಲಾಯಿತು. ಕೇಂದ್ರ ಹಣಕಾಸು ಸೇವೆಗಳ ಇಲಾಖೆಯ ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನದ ಅಂಗವಾಗಿ ಹಾಸನದ ಹಲವು ಗ್ರಾಮಗಳಲ್ಲಿ ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ, ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ ಮತ್ತು ಅಟಲ್ ಪಿಂಚಣಿ ಯೋಜನೆ ಕುರಿತು ಮಾಹಿತಿ ನೀಡಲಾಯಿತು.

*********

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ನಗರದ ಮುತ್ತೂರಿನಲ್ಲಿ ಆಗಸ್ಟ್ ೨೯ರಂದು ನಡೆದ ಗಣೇಶ ವಿಸರ್ಜನೆ ಮೆರವಣಿಗೆ ವೇಳೆ ಸಂಭವಿಸಿದ ಪಟಾಕಿ ಅವಘಡದಲ್ಲಿ ಗಾಯಗೊಂಡಿದ್ದ ಮತ್ತೊಬ್ಬ ಬಾಲಕ ಮೃತಪಟ್ಟಿದ್ದಾನೆ. ಬಾಲಕನನ್ನು ೧೫ ವರ್ಷದ ಯೋಗೇಶ್ ಎಂದು ಗುರುತಿಸಲಾಗಿದೆ. ಘಟನೆಯಲ್ಲಿ ತೀವ್ರ ಗಾಯಗೊಂಡಿದ್ದ ಈತನನ್ನು ಬೆಂಗಳೂರಿನ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಸಾವನಪ್ಪಿದ್ದಾನೆಂದು ಪೊಲೀಸರು ತಿಳಿಸಿದ್ದಾರೆ.ಅಂದು ನಡೆದ ಘಟನೆಯಲ್ಲಿ ೧೫ ವರ್ಷದ ತನುಷ್ ರಾವ್ ಎಂಬಾತ ಮೃತಪಟ್ಟು, ೮ ಮಂದಿ ತೀವ್ರವಾಗಿ ಗಾಯಗೊಂಡಿದ್ದರು. ದೊಡ್ಡಬಳ್ಳಾಪುರ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ವರದಿಯಾಗಿದ್ದು ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರನ್ನು ಬಂಧಿಸಿ, ನ್ಯಾಯಾಂಗ ತನಿಖೆಗೆ ಒಳಪಡಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

*********

ಜಲಜೀವನ್ ಮಿಷನ್ ಯೋಜನೆ ಬಗ್ಗೆ ಜನರಲ್ಲಿ ಇರುವ ತಪ್ಪು ಕಲ್ಪನೆ ಹೋಗಲಾಡಿಸಲು ಮನೆ ಮನೆಗೆ ತ್ವರಿತವಾಗಿ ನೀರು ಸಬರಾಜು ಮಾಡಲು ಸಂಬಂಧಪಟ್ಟ ಇಲಾಖಾಧಿಕಾರಿಗಳು ಕ್ರಮವಹಿಸಬೇಕು ಎಂದು ವಿಶ್ವ ಬ್ಯಾಂಕ್ ಪ್ರತಿನಿಧಿ ಕಲ್ಲಪ್ಪ ಸೂಚಿಸಿದ್ದಾರೆ. ಕೋಲಾರ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಜಲ ಜೀವನ್ ಮಿಷನ್ ಯೋಜನೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಯೋಜನೆಗೆ ವಿಶ್ವ ಬ್ಯಾಂಕ್ ಸಹಕಾರ ನೀಡುತ್ತಿದ್ದು, ರಾಜ್ಯಕ್ಕೆ ೭೦ ಸಾವಿರ ಕೋಟಿ ರೂಪಾಯಿ ಒದಗಿಸಿದೆ. ಸಮರ್ಪಕವಾಗಿ ಯೋಜನೆಯನ್ನು ಜಾರಿಗೆ ತಂದು ಉದ್ದೇಶ ಈಡೇರಿಸಬೇಕು ಎಂದು ತಿಳಿಸಿದರು. ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಡಾ.ಪ್ರವೀಣ್ ಪಿ.ಬಾಗೇವಾಡಿ ಮಾತನಾಡಿ, ಯೋಜನೆ

ಕುರಿತು ಪ್ರತಿವಾರ ಪರಿಶೀಲನೆ ನಡೆಸಲಾಗುತ್ತಿದೆ. ಮುಂದಿನ ಡಿಸೆಂಬರ್ ಒಳಗೆ ೨೪ ತಾಸು ನೀರು ಪೂರೈಸುವ ಕಾರ್ಯ ಕೈಗೆತ್ತಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು.

*********